ಕರ್ನಾಟಕ ಸರ್ಕಾರ
(ಕೃಷಿ ಇಲಾಖೆ)

ಸಂ:ಸಿ-2/ಆಡಳಿತ/LAQ-1559/2024-25 ಕೃಷಿ ಆಯುಕ್ತರ ಕಾರ್ಯಾಲಯ,
ಶೇಷಾದ್ರಿ ರಸ್ತೆ,
ಬೆಂಗಳೂರು
ದಿನಾಂಕ:
07.2024

ಇವರಿಗೆ,
ಸರ್ಕಾರದ ಕಾರ್ಯದರ್ಶಿಗಳು,

ಕೃಷಿ ಇಲಾಖೆ, ಬಹುಮಹಡಿಗಳ ಕಟ್ಟಡ

ಬೆಂಗಳೂರು- 01

ಮಾನ್ಯರೆ,

ವಿಷಯ: ಮಾನ್ಯ ವಿಧಾನಸಭೆ ಸದಸ್ಯರಾದ ಸುರೇಶ್ ಹೆಚ್ . ಕೆ.
(ಬೇಲೂರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:
1559 ಕ್ಕೆ
ಉತ್ತರವನ್ನು ಸಲ್ಲಿಸುವ ಬಗ್ಗೆ.
*****

ಮಾನ್ಯ ವಿಧಾನಸಭೆ ಸದಸ್ಯರಾದ ಸುರೇಶ್ ಹೆಚ್. ಕೆ. (ಬೇಲೂರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1559 ಕ್ಕೆ ಉತ್ತರವನ್ನು ಸಿದ್ದಪಡಿಸಿ ಈ ಪತ್ರದೊಂದಿಗೆ ಲಗತ್ತಿಸಿ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.

ತಮ್ಮ ವಿಶ್ವಾಸಿ,

ಕೃಷಿ
ನಿರ್ದೇಶಕರು

ಕರ್ನಾಟಕ ವಿಧಾನಸಭೆ

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1559
2. ಸದಸ್ಯರ ಹೆಸರು : ಸುರೇಶ್ ಹೆಚ್ . ಕೆ . (ಬೇಲೂರು)
3. ವಿಷಯ: ಕೃಷಿ ಅಧಿಕಾರಿ , ಸಹಾಯಕ ಕೃಷಿ ಅಧಿಕಾರಿಗಳನ್ನು ನೇಮಿಸುವುದು .
4. ಉತ್ತರಿಸಬೇಕಾದ ದಿನಾಂಕ : 24.07.2024.
5. ಉತ್ತರಿಸಬೇಕಾದವರು : ಮಾನ್ಯ ಮುಖ್ಯ ಮಂತ್ರಿ ರವರು

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ಬೇಲೂರು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿರುವ ಕೃಷಿ ಇಲಾಖೆಯ ರೈತ ಸಂಪರ್ಕಗಳಲ್ಲಿ ಕರ್ತವ್ಯ ನಿರ್ವಹಿಸಲು ಕೃಷಿ ಅಧಿಕಾರಿಗಳು ಮತ್ತು ಸಹಾಯಕ ಕೃಷಿ ಅಧಿಕಾರಿಗಳಿಲ್ಲದೇ ಇಲಾಖೆಯ ಕೆಲಸಗಳಿಗಾಗಿ ದೂರದ ಹಳ್ಳಿಗಳಿಂದ ಬರುವ ಸಾರ್ವಜನಿಕರಿಗೆ / ಕೃಷಿಕರಿಗೆ ತೀವ್ರತರವಾದ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;</td><td>ಬೇಲೂರು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಕೃಷಿ ಅಧಿಕಾರಿ ಮತ್ತು ಸಹಾಯಕ ಕೃಷಿ ಅಧಿಕಾರಿ ವೃಂದದಲ್ಲಿ ಮಂಜೂರು , ಭರ್ತಿ ಮತ್ತು ಖಾಲಿ ಹುದ್ದೆಗಳ ಮಾಹಿತಿ ಕೆಳಕಂಡಂತಿದೆ .
<table><tr><th>ಕ್ರ. ಸಂ.</th><th>ವೃಂದ</th><th>ಮಂಜೂರು</th><th>ಭರ್ತಿ</th><th>ಖಾಲಿ</th></tr><tr><td>1</td><td>ಕೃಷಿ ಅಧಿಕಾರಿ</td><td>09</td><td>03</td><td>06</td></tr><tr><td>2</td><td>ಸಹಾಯಕ ಕೃಷಿ ಅಧಿಕಾರಿ</td><td>12</td><td>00</td><td>12</td></tr></table>
ಹೊರಗುತ್ತಿಗೆ /ಗುತ್ತಿಗೆ ಆಧಾರದ ಮೇಲೆ ರಾಷ್ಟ್ರೀಯ ಆಹಾರ ಭದ್ರತಾ ಯೋಜನೆಯಡಿಯಲ್ಲಿ ಸಹಾಯಕ ತಾಂತ್ರಿಕರ ಸೇವೆಯನ್ನು ಹಾಗೂ ಆತ್ಮ ಯೋಜನೆಯಡಿಯಲ್ಲಿ ಉಪಯೋಜನಾ ನಿರ್ದೇಶಕರು , ತಾಲ್ಲೂಕು ತಾಂತ್ರಿಕ ವ್ಯವಸ್ಥಾಪಕರು ಮತ್ತು ಸಹಾಯಕ ತಾಂತ್ರಿಕ ವ್ಯವಸ್ಥಾಪಕರ ಸೇವೆಯನ್ನು ಪಡೆಯಲಾಗಿರುತ್ತದೆ . ಪ್ರತಿ ರೈತ ಸಂಪರ್ಕ ಕೇಂದ್ರಕ್ಕೆ ಒಬ್ಬರಂತೆ ದಾಸ್ತಾನು ನಿರ್ವಹಣಾ ಸಿಬ್ಬಂದಿಗಳ ಸೇವೆಯನ್ನು ಹಾಗೂ ಖಾಲಿ ಇರುವ ಹುದ್ದೆಗಳಿಗನುಗುಣವಾಗಿ ಬೆರಳಚ್ಚುಗಾರರು , ವಾಹನ ಚಾಲಕರು, ಡಿ ಇವರುಗಳ ಸೇವೆಯನ್ನು ಸಹ ಬಳಸಿಕೊಂಡು ಸಕಾಲದಲ್ಲಿ ಇಲಾಖೆಯ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿರುವುದರಿಂದ ಸಾರ್ವಜನಿಕರಿಗೆ / ಕೃಷಿಕರಿಗೆ ತೊಂದರೆಯಾಗದಂತೆ ಕಾರ್ಯ ನಿರ್ವಹಿಸಲಾಗುತ್ತಿದೆ .</td></tr>
</table>

<table>
<tr>
<td>ಆ</td>
<td>ಬಂದಿದ್ದಲ್ಲಿ , ಕೃಷಿ ಚಟುವಟಿಕೆಗಳಿಗೆ ಪೂರಕವಾಗಿ ಸಾರ್ವಜನಿಕರಿಗೆ / ಕೃಷಿಕರಿಗೆ ಸಮರ್ಪಕವಾಗಿ ಕೆಲಸಗಳು ಆಗುವಂತೆ ಮಾಡುವ ನಿಟ್ಟಿನಲ್ಲಿ ತಾಲ್ಲೂಕಿನ ಕೃಷಿ ಇಲಾಖೆಯ ರೈತ ಸಂಪರ್ಕ ಕೇಂದ್ರಗಳಿಗೆ ಕೃಷಿ ಅಧಿಕಾರಿಗಳು ಮತ್ತು ಸಹಾಯಕ ಕೃಷಿ ಅಧಿಕಾರಿಗಳನ್ನು ನೇಮಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಪೂರ್ಣ ವಿವರ ನೀಡುವುದು)</td>
<td>ಸರ್ಕಾರದ ಪತ್ರ ಸಂಖ್ಯೆ : AGRI/245/AGS/2024, ದಿನಾಂಕ 06.02.2024 ರಲ್ಲಿ ಕೃಷಿ ಅಧಿಕಾರಿ ಮತ್ತು ಸಹಾಯಕ ಕೃಷಿ ಅಧಿಕಾರಿ ವೃಂದದಲ್ಲಿ ಕೆಳಕಂಡಂತೆ ನೇರ ನೇಮಕಾತಿ ಕೋಟಾದಡಿ ಖಾಲಿ ಇರುವ ಹುದ್ದೆಗಳನ್ನು ಭರ್ತಿಮಾಡಲು ಅನುಮತಿ ನೀಡಲಾಗಿದ್ದು , ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ .
<table>
<tr><th>ವೃಂದಗಳು</th><th>ಹುದ್ದೆಗಳ ಸಂಖ್ಯೆ</th></tr>
<tr><td>ಕೃಷಿ ಅಧಿಕಾರಿ</td><td>100</td></tr>
<tr><td>ಸಹಾಯಕ ಕೃಷಿ ಅಧಿಕಾರಿ</td><td>650</td></tr>
<tr><td>ಒಟ್ಟು</td><td>750</td></tr>
</table>
</td>
</tr>
</table>

ಕೃಷಿ ನಿರ್ದೇಶಕರು